ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority


ಸಂಖ್ಯೆ: ಇಡಿ/ಕೆಇಎ/ಪತ್ರಿಕಾ ಪ್ರಕಟಣೆ/2024 ದಿನಾಂಕ: 25-06-2024

ಪತ್ರಿಕಾ ಪ್ರಕಟಣೆ

***ಪಿಜಿಸಿಇಟಿ-2024 ರ ಪರೀಕ್ಷೆಯನ್ನು ಮುಂದೂಡಲಾಗಿದೆ - ಹಾಗು ಅರ್ಜಿ ಸಲ್ಲಿಸಲು ಅವಕಾಶ***

ವಿವಿಧ ವಿಶ್ವವಿದ್ಯಾಲಯದ ಪದವಿ ತರಗತಿಯ ಅಂತಿಮ ಸೆಮಿಸ್ಟರ್ ಪರೀಕ್ಷೆಗಳು ಜುಲೈ 5 ಮತ್ತು ಜುಲೈ 10 ರಿಂದ ಪ್ರಾರಂಭವಾಗುತ್ತಿರುವುದರಿಂದ ಜುಲೈ 13 ಮತ್ತು 14 ರಂದು ನಡೆಸಲು ಉದ್ದೇಶಿಸಿರುವ ಪಿಜಿಸಿಇಟಿ 2024 ರ ಪರೀಕ್ಷೆಯನ್ನು ಮುಂದೂಡುವಂತೆ ಅನೇಕ ವಿದ್ಯಾರ್ಥಿಗಳು ಮನವಿ ಸಲ್ಲಿಸಿರುತ್ತಾರೆ. ಈ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ 2024 ನೇ ಸಾಲಿನ ಎಂಬಿಎ, ಎಂಸಿಎ, ಎಂ.ಇ./ಎಂ.ಟೆಕ್./ ಎಂ.ಆರ್ಕಿಟೆಕ್ಚರ್ ಕೋರ್ಸುಗಳ ಪ್ರವೇಶಕ್ಕಾಗಿ ಜುಲೈ 13 ಮತ್ತು 14 ರಂದು ನಡೆಸಲು ನಿಗದಿಪಡಿಸಲಾಗಿದ್ದ ಪಿಜಿಸಿಇಟಿ-2024ರ ಪರೀಕ್ಷೆಯನ್ನು ಮುಂದೂಡಲಾಗಿರುತ್ತದೆ. ಪರಿಷ್ಕೃತ ವೇಳಾಪಟ್ಟಿಯನ್ನು ನಂತರದ ದಿನಗಳಲ್ಲಿ ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು.

ಮುಂದುವರಿದು ಪಿಜಿಸಿಇಟಿ-2024ಕ್ಕೆ ನೊಂದಣಿ ಮಾಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಣೆ ಮಾಡಿ ಅಂತಿಮ ಅವಕಾಶ ಕಲ್ಪಿಸಲಾಗಿದೆ.

ಇಲ್ಲಿಯವರೆಗೆ ನೊಂದಣಿ ಮಾಡದೇ ಇರುವ ಆಸಕ್ತ ಅಭ್ಯರ್ಥಿಗಳು 26-06-2024 ರ ಬೆಳಿಗ್ಗೆ 11.00 ರಿಂದ 07-07-2024 ರಾತ್ರಿ 11.59 ರ ವರೆಗೆ ನೊಂದಣಿ ಮಾಡಿ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಿ 09-07-2024 ರ ಸಂಜೆ 6.00 ರೊಳಗೆ ಶುಲ್ಕವನ್ನು ಪಾವತಿಸಬಹುದಾಗಿದೆ. ನೊಂದಣಿ ಮಾಡಲು ಮತ್ತೊಮ್ಮೆ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

ನವೀಕೃತ ಮಾಹಿತಿಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಅನ್ನು ನೋಡುತ್ತಿರಲು ಕೋರಿದೆ.

ಕಾರ್ಯನಿರ್ವಾಹಕ ನಿರ್ದೇಶಕರು


18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in